ದಿನಾಂಕ 21.07.2026 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ **ಪಾಟೀ ಸವಾಲು: ಪ್ರತಿವಾದಿ ಪರ ಶ್ರೀ.ARK ವಕೀಲರಿಂದ:**

ನನ್ನ ತಾತ ಭೈರಲಿಂಗಯ್ಯ ರವರಿಗೆ 7 ಜನ ಮಕ್ಕಳು ಎಂದರೆ ಸರಿ . ನನ್ನ ತಂದೆಯ ಎಲ್ಲಾ ಅಣ್ಣ ತಮ್ಮಂದಿರ ಮಕ್ಕಳನ್ನು ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿ , ಸಾಕ್ಷಿ ಮುಂದುವರೆದ ನನ್ನ ಎಲ್ಲಾ ಚಿಕ್ಕಪ್ಪಂದಿರು ನನಗೆ ವ್ಯವಸ್ಥಾಪನ ಪತ್ರ ಬರೆದುಕೊಟ್ಟಿದ್ದಾರೆ. ಆ ರೀತಿ ಪತ್ರ ಬರೆದು ಕೊಟ್ಟಿಲ್ಲದಿದ್ದರೂ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ಅವನ ಹೆಂಡತಿ ಮತ್ತು ಮಗನ ಹೆಸರಿನಲ್ಲಿ ಮಾಡಿರುವ ದಾನಪತ್ರವನ್ನು ನಾನು ಪ್ರಶ್ನೆ ಮಾಡಿರುವುದಿಲ್ಲ ಎಂದರೆ ಆ ಬಗ್ಗೆ ನನಗೆ ಗೊತ್ತಿಲ್ಲ. ಈಗ 20 ವರ್ಷದ ಹಿಂದೆ ನಾನು ದಾವಾ ಆಸ್ತಿಯ ಪಹಣಿಯನ್ನು ನೋಡಿದ್ದೇನೆ. ಸಾಕ್ಷಿ ಮುಂದುವರೆದು ತಹಶೀಲ್ದಾರ್ ನ್ಯಾಯಾಲಯದಲ್ಲಿ ಆದೇಶ ಆದ ನಂತರ ನಾನು ಸದರಿ ಪಹಣಿ ಪತ್ರಿಕೆಯನ್ನು ನೋಡಿದ್ದೇನೆ. 20 ವರ್ಷದಿಂದ ಯಾರ ಹೆಸರಿನಲ್ಲಿ ಪಹಣಿ ಇದೆ ಎಂದು ಮತ್ತು ಏನು ಬೆಳವಣಿಗೆ ಆಗಿದೆ ಎಂದು ನಾನು ನೋಡಿರುವುದಿಲ್ಲ ಎಂದರೆ ಸರಿ . ಯಾರು ಕಂದಾಯ ಕಟ್ಟುತ್ತಿದ್ದಾರೆ ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನಲ್ಲಿ ನನಗೆ ಹಕ್ಕು ಇರುವುದಿಲ್ಲ ಮತ್ತು ಸ್ವಾಧೀನಾನುಭವದಲ್ಲಿ ಇರುವುದಿಲ್ಲ ಆದರೂ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ಪ್ರತಿವಾದಿಯರಿಗೆ ತೊಂದರೆ ಕೊಡಬೇಕೆಂಬ ಉದ್ದೇಶದಿಂದ ಮತ್ತು

ದುರುದ್ದೇಶದಿಂದ ಲಾಭ ಮಾಡಿಕೊಳ್ಳಬೇಕೆಂದು ಸುಳ್ಳು ದಾವೆ ಸಲ್ಲಿಸಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಎರಡನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಕನಕಪುರ